ಕರ್ನಾಟಕ ವಿಧಾನ ಸಭೆ, ಸಂಶೋಧನಾ ಹಾಗೂ ಉಲ್ಲೇಖನಾ ಶಾಖೆ
KARNATAKA LEGISLATIVE ASSEMBLY, RESEARCH AND REFERENCE BRANCH
ಪತ್ರಿಕಾ ತುಣುಕುಗಳು
PAPER CLIPPINGS
ಇಲಾಖೆ / ವಿಷಯ : DEPARTMENT / SUBJECT:
ಪತ್ರಿಕೆಯ ಹೆಸರು : NAME OF THE NEWS PAPER:
ದಿನಾಂಕ : DATE:

# ರಾಜಕಾರಣಕ್ಕೆ ಡಿಕೆಶಿ ನಾಲಾಯಕ್: ರಮೇಶ್

## ಚುನಾವಣೆಯಲ್ಲಿ ಕನಕಪುರದಲ್ಲೇ ಠಿಕಾಣಿ ಹೂಡಿ ಡಿಕೆಶಿ ಸೋಲಿಸುವುದಾಗಿ ಶಪಥ

ಬೆಂಗಳೂರು: ಸಿಡಿ ಪ್ರಕರಣಕ್ಕೆ ಸಂಬಂಧಿಸಿದಂತೆ ಮಹತ್ವದ ದಾಖಲೆ ಬಿಡುಗಡೆ ಮಾಡುವುದಾಗಿ ಹೇಳಿದ್ದ ಮಾಜಿ ಸಚಿವ ರಮೇಶ್ ಜಾರಕಿಹೊಳಿ, ಯಾವುದೇ ದಾಖಲೆಗಳನ್ನು ಬಿಡುಗಡೆ ಮಾಡಿಲ್ಲ. ಬದಲಾಗಿ, ಕೆಪಿಸಿಸಿ ಅಧ್ಯಕ್ಷ ಡಿ.ಕೆ. ಶಿವಕುಮಾರ್ ರಾಜಕೀಯಕ್ಕೆ ನಾಲಾಯಕ್ ಎಂದು ಆಕ್ರೋಶ ವ್ಯಕ್ತಪಡಿಸಿದ್ದಾರೆ.

ಒತೆಗೆ ಒಂದು ಹಂತದಲ್ಲಿ ಅವಾಚ್ಯ ಶಬ್ದಗಳಿಂದ ನಿಂದಿಸಿ, ಮುಂದಿನ ವಿಧಾನಸಭೆ ಚುನಾವಣೆಯಲ್ಲಿ ಕನಕಪುರದಲ್ಲೇ ಠಿಕಾಣಿ ಹೂಡಿ ಅವರನ್ನು ಸೋಲಿಸುವುದಾಗಿ ಶಪಥ ಸಹ ಮಾಡಿದರು.

ಸುದ್ದಿಗಾರರ ಜತೆ ಮಾತನಾಡಿ, ಇಡೀ ಪ್ರಕರಣಕ್ಕೆ ಸಂಬಂಧಿಸಿದಂತೆ ನಮ್ಮಲ್ಲಿ 11 ಸಾಕ್ಷ್ಯಾಧಾರಗಳಿವೆ. ಪ್ರಕರಣದ ಮಹಾ ನಾಯಕ ಯಾರು ಎಂಬುದು ಎಲ್ಲರಿಗೂ ಗೊತ್ತಾಗಿದೆ. ಇದೊಂದು ದೊಡ್ಡ ರಾಜಕೀಯ ಷಡ್ಯಂತ್ರ. ಡಿ.ಕೆ.ಶಿವಕುಮಾರ್ ಇದನ್ನು ಮಾಡಿದ್ದಾರೆ ಎಂದು ಶುಕ್ರವಾರದವರೆಗೂ ನಂಬಿರಲಿಲ್ಲ.



ಸುದ್ದಿಗಾರರೊಂದಿಗೆ ಮಾತನಾಡಿದ ರಮೇಶ್ ಜಾರಕಿಹೊಳಿ.

ಆದರೆ, ಯುವತಿಯ ಪೋಷಕರು ಹೇಳಿದ ಮೇಲೆ ಇದರಲ್ಲಿ ರಾಜಕೀಯ ಷಡ್ಯಂತ್ರ ಅಡಗಿರುವುದು ಸ್ಪಷ್ಟವಾಗಿದೆ. ಡಿ.ಕೆ.ಶಿವಕುಮಾರ್ ವಿರುದ್ಧ ದೂರು ದಾಖಲಿಸಲಿದ್ದೇವೆ ಎಂದು ಡಿಕೆಶಿ ವಿರುದ್ಧ ನೇರ ವಾಗ್ದಾಳಿ ನಡೆಸಿ, ಆಕ್ರೋಶ ಹೊರಹಾಕಿದರು.

**ರಮೇಶ್ ಜಾರಕಿಹೊಳಿ ಹೇಳಿದ್ದೇನು?:** ಪ್ರಕರಣದ ಕಿಂಗ್‌ಪಿನ್ ನರೇಶ್ ಗೌಡನ ಪರಿಚಯವಿದೆ ಎಂದು ಮಹಾನಾಯಕ ಹೇಳಿಕೊಂಡಿದ್ದಾರೆ. ಪೊಲೀಸರು ಶೀಘ್ರ ತನಿಖೆ ಮಾಡಿ, ಅಪರಾಧಿ ಯಾರು ಎಂಬುದನ್ನು ಪತ್ತೆ ಮಾಡಬೇಕು. ನಾನು ಅಪರಾಧಿಯಾದರೆ ನನ್ನನ್ನು ಒದ್ದು ಒಳಗೆ ಹಾಕಲಿ ಅಥವಾ ಆ ಮಹಾ ನಾಯಕ ಅಪರಾಧಿಯಾದ ಅವನನ್ನು ಒದ್ದು ಒಳಗೆ ಹಾಕಲಿ ಎಂದರು.

ಡಿ.ಕೆ.ಶಿವಕುಮಾರ್ ವಿರುದ್ಧ ಜಾತಿ ನಿಂದನೆ ಯಡಿ ಪ್ರಕರಣ ದಾಖಲಿಸಿ, ಜೈಲಿಗೆ ಹಾಕಬೇಕು. ಇವರು ರಾಜಕೀಯಕ್ಕೆ ನಾಲಾಯಕ್. ಯಾರು ಕೂಡ ಇಂತಹ ಚಟುವಟಿಕೆ ಮಾಡಬಾರದು. ಕಾಂಗ್ರೆಸ್ ಪಕ್ಷದ ನಾಯಕರಲ್ಲಿ ಮನವಿ ಮಾಡುತ್ತೇನೆ. ಡಿ.ಕೆ.ಶಿವಕುಮಾರ್ ರಾಜಕೀಯ ನಿವೃತ್ತಿ ತೆಗೆದುಕೊಳ್ಳುವುದು ಒಳ್ಳೆಯದು ಎಂದು ಅವಾಚ್ಯ ಶಬ್ದಗಳಿಂದ ನಿಂದಿಸಿ, ಅವರ ವಿರುದ್ಧ ನೇರ ಹೋರಾಟ ಮಾಡುವುದಾಗಿ ಸವಾಲು ಹಾಕಿದರು.

ಅವರ ವಿರುದ್ಧ ದೂರು ನೀಡುವ ಸಂಬಂಧ ವಕೀಲರೊಂದಿಗೆ ಮಾತುಕತೆ ನಡೆಸಿದ್ದೇನೆ. ದೂರು ನೀಡುತ್ತೇವೆ. ಡಿ.ಕೆ.ಶಿವಕುಮಾರ್ ವಿರುದ್ಧ ಕನಕಪುರಕ್ಕೆ ಹೋಗಿ, ಮುಂದಿನ ಚುನಾವಣೆಯಲ್ಲಿ ಅವರ ವಿರುದ್ಧವೇ ಹೋರಾಟ ಮಾಡುತ್ತೇನೆ. ಕನಕಪುರದಲ್ಲಿ ಕುಮಾರಸ್ವಾಮಿ ಸಹಿತವಾಗಿ ಯಾರೊಂದಿಗೆ ಬೇಕಾದರೂ ತೆರೆಮರೆ ಸಹಕಾರದೊಂದಿಗೆ ಅವರನ್ನು ಸೋಲಿಸಲು ಹೋರಾಟ ಮಾಡುತ್ತೇನೆ. ಗೋಕಾಕ್‌ನಲ್ಲಿ ಸಹೋದರ ಚುನಾವಣೆಯಲ್ಲಿ ಸ್ಪರ್ಧಿಸುತ್ತಾರೆ ಎಂದು ಹೇಳಿದರು.

ಎಲ್ಲ ರೀತಿಯ ಹೋರಾಟಕ್ಕೂ ನಾನು ಸಿದ್ಧನಿದ್ದೇನೆ. ಆ ಯುವತಿಯ ಬಗ್ಗೆ ನನಗೇನೂ ಗೊತ್ತಿಲ್ಲ. ಆ ಯುವತಿಗೆ ಏನೇ ಆದರೂ ಡಿ.ಕೆ.ಶಿವಕುಮಾರ್ ಕಂಪನಿಯೇ ಕಾರಣ. ಯುವತಿ ಸತ್ತರೂ ಡಿ.ಕೆ.ಶಿವಕುಮಾರ್ ನೇರ ಜವಾಬ್ದಾರಿಯಾಗುತ್ತಾರೆ. ದೇಶದಲ್ಲಿ ಕಾನೂನಿದೆ. ಯಾರು ಭಯಪಡಬೇಕಾಗಿಲ್ಲ. ಗಣಪತಿ ಪ್ರಕರಣದಲ್ಲಿ ಏನಾಗಿದೆ ಎಂಬುದು ಎಲ್ಲರಿಗೂ ಗೊತ್ತಿದೆ. ಈ ಬಗ್ಗೆ ಮುಖ್ಯಮಂತ್ರಿಯವರೊಂದಿಗೂ ಮಾತನಾಡಲಿದ್ದೇವೆ ಎಂದರು.